**All India Radio: Bangalore**
**Regional Bulletin In Kannada**
**10.07.2025 / 6.40p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

೧. ಚಾಲಕರಲ್ಲಿ ಹೆಚ್ಚುತ್ತಿರುವ ಹೃದಯಾಘಾತ ಪ್ರಕರಣ - ಗಂಭೀರವಾಗಿ ಪರಿಗಣಿಸಿದ ಆರೋಗ್ಯ ಇಲಾಖೆ

೨. ಸಾರ್ವಜನಿಕ ಸ್ಥಳಗಳಲ್ಲಿ ಗುಪ್ತವಾಗಿ ಮಹಿಳೆಯರ ವಿಡಿಯೋ ಚಿತ್ರೀಕರಣ ಮಾಡಿದರೆ ಕಾನೂನಾತ್ಮಕ ಕ್ರಮ ; ಮುಖ್ಯಮಂತ್ರಿ ಸಿದ್ದರಾಮಯ್ಯ

೩. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ-ವಿಟಿಯು ತಾಂತ್ರಿಕ ಹಬ್ ಲೋಕಾರ್ಪಣೆಗೊಳಿಸಿದ ಕೇಂದ್ರ ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ

೪. ರಾಜ್ಯದ ೧೦ ಜಿಲ್ಲೆಯಲ್ಲಿ ಶ್ರಮಿಕ, ತಾತ್ಕಾಲಿಕ ವಸತಿ ಸಮುಚ್ಚಯ ನಿರ್ಮಿಸಲು ಸರ್ಕಾರ ನಿರ್ಧಾರ

೫. ಪಾಲಿಕೆ ನೌಕರರ ಬೇಡಿಕೆ ಈಡೇರಿಸುವಂತೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಆಗ್ರಹ

**<><><><>**

ಹಾಸನದಲ್ಲಿ ಸಂಭವಿಸಿದ ಹೃದಯಾಘಾತ ಪ್ರಕರಣ ಕುರಿತಂತೆ ಸರ್ಕಾರಕ್ಕೆ ತನಿಖಾ ವರದಿ ಸಲ್ಲಿಕೆಯಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ವರದಿಯಲ್ಲಿ ಮಧುಮೇಹ, ಮದ್ಯಪಾನ ಕುಟುಂಬದ ಹಿನ್ನೆಲೆ ಕಾರಣ ಎಂದು ಉಲ್ಲೇಖಿಸಲಾಗಿದೆ. ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ ಹಾಸನದಲ್ಲಿ ಈ ವರ್ಷ ಹೃದಯಾಘಾತ ಪ್ರಕರಣಗಳು ಕಡಿಮೆ ಎಂದು ಹೇಳಿದ್ದಾರೆ.

ಹಾಸನದಲ್ಲಿ ಸಾವನ್ನಪ್ಪಿದ ೨೦ ಮಂದಿಯಲ್ಲಿ ೬ ಮಂದಿ ಆಟೋ ಮತ್ತು ಕ್ಯಾಬ್ ಚಾಲಕರಾಗಿದ್ದು, ಶೇಕಡ ೩೦ರಷ್ಟು ಮಂದಿ ಚಾಲಕರೇ ಹೃದಯಾಘಾತದಿಂದ ಸಾವನ್ನಪ್ಪುತ್ತಿರುವ ಬಗ್ಗೆ ಕಳವಳ

ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಆಟೋ, ಕ್ಯಾಬ್ ಚಾಲಕರಿಗೆ ಪ್ರತ್ಯೇಕ ತಪಾಸಣೆ ಮಾಡಿಸುವಂತೆ ಸಲಹೆ ನೀಡಿದ್ದಾರೆ.

ಮಕ್ಕಳಿಗೂ ಆರೋಗ್ಯ ತಪಾಸಣೆ ನಡೆಸಲು ಹಾಗೂ ಹೃದಯ ಜ್ಯೋತಿ ಯೋಜನೆ ವಿಸ್ತರಿಸಲು ತಜ್ಞರು ಸಲಹೆ ನೀಡಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ. ಕೋವಿಡ್‌ಗೂ ಇದಕ್ಕೂ ಸಂಬಂಧವಿಲ್ಲ ಎಂದು ಪುನರುಚ್ಛರಿಸಿದ್ದಾರೆ.

<><><><>

ಸಾರ್ವಜನಿಕ ಸ್ಥಳಗಳಲ್ಲಿ ಗುಪ್ತವಾಗಿ ಮಹಿಳೆಯರ ವಿಡಿಯೋ ಚಿತ್ರೀಕರಣ ಮಾಡುವುದು, ಹಾಗೂ ಅವರಿಗೆ ಕಿರುಕುಳ ನೀಡುವವರ ವಿರುದ್ಧ ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

ಮಹಿಳೆಯರ ಘನತೆಗೆ ಚ್ಯುತಿ ಉಂಟು ಮಾಡುವ ವಿಡಿಯೋಗಳು ಅಥವಾ ಖಾತೆಗಳನ್ನು ಅನ್‌ಲೈನ್‌ನಲ್ಲಿ ನೋಡಿದರೆ ತಕ್ಷಣವೇ ೧-೯-೩-೦ ಗೆ ಕರೆ ಮಾಡಬಹುದು. ಇಲ್ಲವೇ ಛಿಥಿಛಜಡಿಛಿಡಿಟಜ.ರಿಠಿತಿ.ಎಟಿ ನಲ್ಲಿ ದೂರು ದಾಖಲಿಸಬಹುದು ಎಂದು ತಿಳಿಸಿದ್ದಾರೆ.

<><><><>

ನಾವೀಗ ೬-ಜಿ ಕ್ರಾಂತಿಯ ಅಂಚಿನಲ್ಲಿದ್ದು, ಕೇವಲ ೧ ದಶಕದಲ್ಲಿ ಬ್ರಾಡ್ ಬ್ಯಾಂಡ್ ಬಳಕೆದಾರರ ಸಂಖ್ಯೆ ೬೦ ಮಿಲಿಯನ್‌ನಿಂದ ೯೪೦ ಮಿಲಿಯನ್‌ಗೆ ತಲುಪಿದೆ ಎಂದು ಕೇಂದ್ರ ಸಂವಹನ ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ ತಿಳಿಸಿದ್ದಾರೆ.

ಬೆಂಗಳೂರಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಪ್ರಾದೇಶಿಕ ಕಚೇರಿಯಲ್ಲಿ ತಾಂತ್ರಿಕ ಹಬ್ ಮತ್ತು ಸ್ಪೋಕ್ ಆಫ್ ಎಕ್ಸಲೆನ್ಸ್ ಉದ್ಘಾಟಿಸಿ ಮಾತನಾಡಿದ ಅವರು, ಭಾರತದ ಅಭಿವೃದ್ಧಿಗೆ ಕೊಡುಗೆ ನೀಡುವ ನವೋದ್ಯಮಗಳ ಮಹತ್ವವನ್ನು ಒತ್ತಿ ಹೇಳಿದ್ದಾರೆ.

ಉದಯೋನ್ಮುಖ ಕ್ಷೇತ್ರಗಳಾದ ಕೃತಕಬುದ್ಧಿಮತ್ತೆ-ಮಷಿನ್ ಲರ್ನಿಂಗ್, ಕ್ವಾಟಂ ಕಂಪ್ಯೂಟಿಂಗ್, ಹೆಲ್ತ್‌ಕೇರ್ ಮತ್ತು ಇತರೆ ಪ್ರಮುಖ ತಂತ್ರಜ್ಞಾನ ಕುರಿತು ಇಲ್ಲಿ ಸಂಶೋಧನೆ ನಡೆಯಲಿದೆ ಎಂದು ಹೇಳಿದ್ದಾರೆ.

೨೧೦ಕ್ಕೂ ಹೆಚ್ಚು ಇಂಜಿನಿಯರಿಂಗ್ ಕಾಲೇಜುಗಳು ೨೦ ಸಾವಿರ ಪಿಎಚ್‌ಡಿ ಪದವಿಧರರು ಮತ್ತು ೪ ಲಕ್ಷ ಪದವೀಧರರಿಗೆ ಮತ್ತು ಸ್ನಾತಕೋತ್ತರ ಪದವೀಧರರು ಇದನ್ನು ಸದ್ಬಳಕೆ ಮಾಡಿಕೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ.

<><><><>

ಮುಖ್ಯಮಂತ್ರಿ ಬದಲಾವಣೆ ವಿಚಾರ ಮಾಧ್ಯಮಗಳ ಸೃಷ್ಟಿಯಾಗಿದ್ದು, ಊಹಾಪೋಹಗಳಿಗೆ ಆಸ್ಪದ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿಕಾರದ ಹಸ್ತಾಂತರ ಬಗ್ಗೆ ಯಾವುದೇ ಒಪ್ಪಂದವಾಗಿಲ್ಲ ಎಂದು ತಿಳಿಸಿದ್ದಾರೆ. ಶಾಸಕರ ಅಭಿಪ್ರಾಯ ಪಕ್ಷದ ವರಿಷ್ಠರ ತೀರ್ಮಾನವಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಇದೇ ವೇಳೆ ಸಿಬಿಎಸ್‌ಇ ಕನ್ನಡ ಪತ್ರಿಕೆಯನ್ನು ೧೨೫ ಅಂಕಗಳಿಂದ ೧೦೦ಕ್ಕೆ ಇಳಿಸುವ ಪ್ರಸ್ತಾಪ ಬಂದಿರುವ ಬಗ್ಗೆ ಪ್ರತಿಕ್ರಿಯಿಸಿ ಈ ಬಗ್ಗೆ ಸಚಿವ ಸಂಪುಟದಲ್ಲಿ ಚರ್ಚೆಯಾಗಿಲ್ಲ ಎಂದು ತಿಳಿಸಿದ್ದಾರೆ. ವಿಶ್ವ ವಿದ್ಯಾನಿಲಯ ಕಾಲೇಜುಗಳಲ್ಲಿ ಕ್ಯಾಂಪಸ್ ಆಯ್ಕೆಯನ್ನು ಪರಿಚಯಿಸುವ ಬಗ್ಗೆ ಚಿಂತನೆ ನಡೆಸಲಾಗುತ್ತಿದೆ ಎಂದು ಹೇಳಿದ್ದಾರೆ.

<><><><>

ಪಕ್ಷದ ಹೈಕಮಾಂಡ್ ಎಲ್ಲಾ ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಗೃಹ ಸಚಿವ ಡಾ  ಜಿ. ಪರಮೇಶ್ವರ್  ತಿಳಿಸಿದ್ದಾರೆ.

ರಾಜ್ಯದಲ್ಲಿ ನಾಯಕತ್ವ ಬದಲಾವಣೆಯ ಕುರಿತು ನಡೆಯುತ್ತಿರುವ ಊಹಾಪೋಹಗಳ ನಡುವೆ, ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸರಿಯಾದ ಸಮಯದಲ್ಲಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಹೇಳಿದ್ದಾರೆ.

ಇನ್ನೊಂದು ನಾಟಕ ಕಂಪನಿ ಪ್ರಾರಂಭಿಸಲು ಬಯಸುವುದಿಲ್ಲ ಎಂದ ಅವರು, ಪಕ್ಷದ ಹಿತಾಸಕ್ತಿಗೆ ವಿರುದ್ಧವಾಗಿ ಬೆಳವಣಿಗೆ ನಡೆದರೆ ಅದನ್ನು ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಅಸಂಘಟಿತ ಕಾರ್ಮಿಕರ ಹಿತರಕ್ಷಣೆಗಾಗಿ ಸರ್ಕಾರ ಹಲವಾರು ಯೋಜನೆಗಳನ್ನು ರೂಪಿಸಿದ್ದು, ೨೩ ಅಸಂಘಟಿತ ವರ್ಗಗಳ ಕಾರ್ಮಿಕರನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್‌ಗಳನ್ನು ನೀಡಲಾಗುತ್ತಿದೆ ಎಂದು ಕಾರ್ಮಿಕ ಸಚಿವ  ಸಂತೋಷ್ ಲಾಡ್ ತಿಳಿಸಿದ್ದಾರೆ.

ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಅಸಂಘಟಿತ ವರ್ಗಗಳ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇಶದಲ್ಲಿ ಶೇಕಡ ೯೦ರಷ್ಟು ಅಸಂಘಟಿತ

ಕಾರ್ಮಿಕರಿದ್ದು, ಸಾಮಾಜಿಕ ಭದ್ರತೆ ಒದಗಿಸಲಾಗುತ್ತಿದೆ. ಉದ್ಯೋಗಕ್ಕಾಗಿ ವಲಸೆ ಬರುವ ಬೇರೆ ಜಿಲ್ಲೆಗಳ ಕಾರ್ಮಿಕರಿಗಾಗಿ ರಾಜ್ಯದ ೧೦ ಜಿಲ್ಲೆಯಲ್ಲಿ ಶ್ರಮಿಕ ತಾತ್ಕಾಲಿಕ ವಸತಿ ಸಮುಚ್ಛಯಗಳನ್ನು ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಧ್ವನಿ : ಸಂತೋಷ್ ಲಾಡ್

ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಮಾತನಾಡಿ, ಕಾರ್ಖಾನೆಗಳಿಗೆ ಜಮೀನು ನೀಡಿದವರಿಗೆ ಮೊದಲು ಉದ್ಯೋಗದಲ್ಲಿ ಆದ್ಯತೆ ನೀಡಬೇಕು ಎಂದು ಹೇಳಿದ್ದಾರೆ.

<><><><>

ಕೇವಲ ಶಾಸಕರ ದುಃಖ, ದುಮ್ಮಾನ ಕೇಳಿದರೆ ಸಾಲದು, ನೌಕರರ ನ್ಯಾಯಯುತ ಬೇಡಿಕೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಈಡೇರಿಸಬೇಕು ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

ಪಾಲಿಕೆ ನೌಕರರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಲು ವಿಳಂಬ ಧೋರಣೆ ಯಾಕೆ ಎಂದು ಪ್ರಶ್ನಿಸಿದ್ದಾರೆ. ಹಗಲಿರುಳು ಜನರಿಗಾಗಿ ದುಡಿಯುವ ಅವರ ಬದುಕಿಗೂ ಗ್ಯಾರಂಟಿ ಕೊಡಬೇಕಲ್ಲವೇ ಎಂದು ತಿಳಿಸಿದ್ದಾರೆ.

<><><><>

ಬೆಟ್ಟಿಂಗ್ ಆಪ್ ಹಗರಣದಲ್ಲಿ ಭಾಗಿಯಾಗಿರುವ ಆರೋದ ಮೇಲೆ ಕನ್ನಡ ನಟಿ ಪ್ರಣೀತಾ ಸುಭಾಷ್ ಬಹುಭಾಷಾ ನಟ ಪ್ರಕಾಶ್ ರಾಜ್ ಸೇರಿದಂತೆ ೨೯ ತಾರೆಯರ ವಿರುದ್ಧ ಜಾರಿ ನಿರ್ದೇಶನಾಲಯ ಪ್ರಕರಣ ದಾಖಲಿಸಿದೆ.

ಈ ಸೆಲೆಬ್ರಿಟಿಗಳು ಆನ್‌ಲೈನ್ ಬೆಟ್ಟಿಂಗ್ ಆಪ್‌ಗಳ ಪರ ಪ್ರಚಾರ ನಡೆಸಿದ್ದರು. ಇದಕ್ಕಾಗಿ ಹಣ ಪಡೆದಿದ್ದಾರೆ ಎಂಬ ಆರೋಪದ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

<><><><>

ಕೋಲಾರ ಜಿಲ್ಲೆಯ ಗಡಿ ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಯೋಜನೆ ರೂಪಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ.

ಬಂಗಾರಪೇಟೆ ತಾಲೂಕಿನ ದೋಣಿಮಡಗು ಹೋಬಳಿಯ ಕದರಿನತ್ತ ಗ್ರಾಮಕ್ಕೆ ಭೇಟಿ ನೀಡಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಗಡಿ ಗ್ರಾಮಗಳನ್ನು ಗುರುತಿಸಿ ಮ್ಯಾಪಿಂಗ್ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

ಕಾಡಂಚಿನ ಗ್ರಾಮಗಳು ಹಾಗೂ ಅಂತಾರಾಜ್ಯ ಗಡಿ ಗ್ರಾಮಗಳನ್ನು ಗುರುತಿಸಿ, ಅವರು ಅನುಭವಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸುವ ಕಾರ್ಯ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಧ್ವನಿ : ಡಾ.ಎಂ.ಆರ್.ರವಿ

<><><><>

ಹಾವೇರಿ ಜಿಲ್ಲೆಯಲ್ಲಿ ಪೂರ್ವ ಮುಂಗಾರು ಹಾಗೂ ಮುಂಗಾರು ಮಳೆಯಿಂದಾಗಿ ೧೪೮.೫೭ ಹೆಕ್ಟೇರ್ ಪ್ರದೇಶದಲ್ಲಿದ್ದ ಬೆಳೆ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿ ವಿಜಯಕುಮಾರ ದಾನಮ್ಮನವರ ತಿಳಿಸಿದ್ದಾರೆ.

ಬೆಳೆ ಹಾನಿ ಬಗ್ಗೆ ಜಂಟಿ ಸಮೀಕ್ಷೆಯಿಂದ ವರದಿ ಸಿದ್ಧಪಡಿಸಲಾಗಿದ್ದು, ೧೦೨.೮೦ ಹೆಕ್ಟೇರ್ ಪ್ರದೇಶದಲ್ಲಿದ್ದ ಕೃಷಿ ಬೆಳೆ ಹಾಗೂ ೪೫.೪೭ ಹೆಕ್ಟೇರ್ ಪ್ರದೇಶದಲ್ಲಿದ್ದ ತೋಟಗಾರಿಕೆ ಬೆಳೆಗೆ ಹಾನಿಯಾಗಿದೆ. ಜಿಲ್ಲೆಯಲ್ಲಿ ಸುರಿಯುತ್ತಿರುವ ಮಳೆ ಹಾಗೂ ಆಗಾಗ ಬೀಸುವ ಗಾಳಿಯಿಂದಾಗಿ ೫೫ ಮನೆಗಳಿಗೆ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿ ಸ್ಪಷ್ಟಪಡಿಸಿದ್ದಾರೆ.

<><><><>

ಯಾದಗಿರಿ ಜಿಲ್ಲೆಯಲ್ಲಿ ಸೇವೆ ಸಲ್ಲಿಸಿ ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿ ವರ್ಗಾವಣೆಗೊಂಡಿರುವ ಡಾ.ಬಿ.ಸುಶೀಲಾ ಅವರಿಗೆ ಹಾಗೂ ರಾಯಚೂರಿಗೆ ವರ್ಗಾವಣೆಗೊಂಡಿರುವ ಈ ಹಿಂದಿನ ಹೆಚ್ಚುವರಿ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಅವರಿಗೆ ಯಾದಗಿರಿ ಜಿಲ್ಲಾಡಳಿತದ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಬೀಳ್ಕೊಡಲಾಯಿತು.

ಇದೇ ಸಂದರ್ಭದಲ್ಲಿ ನೂತನ ಜಿಲ್ಲಾಧಿಕಾರಿಗಳಾಗಿ ಅಧಿಕಾರಿ ವಹಿಸಿಕೊಂಡಿರುವ ಹರ್ಷಲ್ ಬೋಯರ್ ಹಾಗೂ ಹೆಚ್ಚುವರಿ ಜಿಲ್ಲಾಧಿಕಾರಿ ರಮೇಶ್ ಕೋಲಾರ್ ಅವರಿಗೆ ಆತ್ಮೀಯ ಸ್ವಾಗತ ನೀಡಲಾಯಿತು.

<><><><>

ರಾಜ್ಯದ ವಿವಿಧೆಡೆ ಇಂದು ಹಡಪದ ಅಪ್ಪಣ್ಣ ಜಯಂತಿ ಆಚರಿಸಲಾಯಿತು.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 'ಹಡಪದ ಅಪ್ಪಣ್ಣ ಜಯಂತಿಯನ್ನು ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಆಚರಿಸಲಾಯಿತು. ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಶಾ ಮಾತನಾಡಿ ಹನ್ನೆರಡನೆಯ ಶತಮಾನದ ವಚನ ಚಳುವಳಿ ಮತ್ತು ಸಾಮಾಜಿಕ ಕ್ರಾಂತಿಯ ಹರಿಕಾರ ಹಡಪದ ಅಪ್ಪಣ್ಣ ಎಂದು ತಿಳಿಸಿದರು.

ಹಡಪದ ಅಪ್ಪಣ್ಣನವರು ಜಗಜ್ಯೋತಿ ಬಸವಣ್ಣನವರ ಆಪ್ತರ ಬಳಗದಲ್ಲಿ ಒಬ್ಬರಾಗಿ ಸಾಮಾಜಿಕ ಸುಧಾರಣೆಯಲ್ಲಿ ಭಾಗಿಯಾಗಿದ್ದರು ಎಂದು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷ ಹಾಗೂ  ಶಾಸಕ ಪಿ.ಎಂ.ನರೇಂದ್ರಸ್ವಾಮಿ ಮಂಡ್ಯದಲ್ಲಿ ತಿಳಿಸಿದ್ದಾರೆ.

<><><><>